ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಕೊಡಗಿನ ಪವಿತ್ರ ಕ್ಷೇತ್ರ ತಲಕಾವೇರಿಯಲ್ಲಿ ಧಾರ್ಮಿಕ ಪಾವಿತ್ರ್ಯತೆಯನ್ನು ಕಾಪಾಡಲು ಕ್ರಮ ವಹಿಸುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) -

48 (361) ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ದೇಶದ ಅತ್ಯಂತ ಪವಿತ್ರ ಧಾರ್ಮಿಕ ಶ್ರದ್ಧಾ ಕೇಂದ್ರಗಳಲ್ಲಿ ಒಂದಾದ, ಕೊಡಗು ಜಿಲ್ಲೆಯಲ್ಲಿನ ತಲಕಾವೇರಿಯಲ್ಲಿ ಪ್ರವಾಸಿಗರು ತಮ್ಮ ಭೇಟಿಯ ಸಂದರ್ಭದಲ್ಲಿ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ಬರುವ ರೀತಿಯಲ್ಲಿ ನಡೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪವಿತ್ರ ಧಾರ್ಮಿಕ ಶ್ರದ್ಧಾ ಕೇಂದ್ರವಾದ ತಲಕಾವೇರಿಯನ್ನು ಪ್ರವಾಸಿ ತಾಣದ ರೀತಿಯಲ್ಲಿ ಪರಿಗಣಿಸಿ, ಧಾರ್ಮಿಕ ಶ್ರದ್ಧೆಗೆ ವಿರುದ್ಧದ ರೀತಿಯ ಚಟುವಟಿಕೆಗಳನ್ನು ಮಾಡುತ್ತಿರುವ ಪ್ರವಾಸಿಗರಿಗೆ ನಿರ್ಬಂಧಗಳನ್ನು ವಿಧಿಸುವ ಮೂಲಕ ಕ್ಷೇತ್ರದ ಧಾರ್ಮಿಕ ಪಾವಿತ್ರ್ಯತೆಯನ್ನು ಕಾಪಾಡಲು ಸರ್ಕಾರ ಕ್ರಮ ವಹಿಸುವುದೇ ;

(ಇ) ತಲಕಾವೇರಿ ಕ್ಷೇತ್ರದಲ್ಲಿ ಧಾರ್ಮಿಕ ಚಟುವಟಿಕೆಗಳಿಗೆ ಮಾತ್ರ ಅವಕಾಶವಿರುವಂತೆ ಸ್ಪಷ್ಟ ಹಾಗೂ ಕಡ್ಡಾಯ ಮಾರ್ಗಸೂಚಿಗಳನ್ನು ಅಳವಡಿಸಿ, ಅವುಗಳ ಪಾಲನೆಯಾಗುವಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ?